# 2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿತ್ರದುರ್ಗ

## ಎಸ್.ಸಿ. ನಂ. 179/2024

ಪ್ರ.ವ.ಬೋ. ದಿನಾಂಕ - 07-1-2026

| | | | |
|---|---|---|---|
| ಸಾಕ್ಷಿದಾರರ ಹೆಸರು | - ಶಿವಣ್ಣ | ಫ್ರಾ.ಸಾ. | - 02 |
| ತಂದೆಯ ಹೆಸರು | - ರಾಜಣ್ಣ | ಚಾ.ಸಾ. | - 03 |
| ವಯಸ್ಸು | - 23 ವರ್ಷ | | |
| ಉದ್ಯೋಗ | - ಹಮಾಲಿ ಕೆಲಸ | | |
| ವಾಸ ಸ್ಥಳ | - ಹಿರಿಯೂರು | | |

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**- ಮುಖ್ಯ ವಿಚಾರಣೆ - ಸರ್ಕಾರಿ ಅಭಿಯೋಜಕರಿಂದ -**

ಸಾಕ್ಷಿಗೆ ನಿಪಿ:2 ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ:2(ಬಿ) ಎಂದು ಗುರುತಿಸಲಾಯಿತು. ಸುಮಾರು ಒಂದು ವರ್ಷದ ಹಿಂದೆ ಹಿರಿಯೂರಿನ ಗಾಂಧಿ ಸರ್ಕಲ್ ಹತ್ತಿರ ಯಾರೋ ಜಗಳವಾಡಿದ ಸ್ಥಳದಲ್ಲಿ ಪೋಲಿಸರು ಮಹಜರ ಮಾಡಿರುತ್ತಾರೆ. ಪೋಲಿಸರು ಸ್ಥಳದಿಂದ ಯಾವುದೇ ವಸ್ತುಗಳನ್ನು ತೆಗೆದುಕೊಂಡ ಬಗ್ಗೆ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ:3 ರಿಂದ 6 ರ ಫೋಟೊಗಳನ್ನು ನೋಡಿ ಗುರುತಿಸಿರುತ್ತಾರೆ.

(ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ : ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದು ಸಾಕ್ಷಿಯ ಸಾಕ್ಷ್ಯವನ್ನು ಪರಿಗಣಿಸಿ ಅನುಮತಿ ನೀಡಲಾಯಿತು. )

**- ಪಾಟೀ ಸವಾಲು - ವಿಶೇಷ ಸರ್ಕಾರಿ ಅಭಿಯೋಜಕರಿಂದ -**

ದಿ. 19.5.2024 ರಂದು ಹಿರಿಯೂರು ನಗರದ ಕೆ.ಎಂ. ಕೊಟ್ಟಿಗೆ ಡಿ.ಸಿ. ಕಾಲೋನಿಯ ನಾರಿನ ಮಿಲ್ ಹಿಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಆರೋಪಿಯು ಚಾಸಾ:1 ರವರಿಗೆ ಹೊಡೆದ ಸ್ಥಳದಲ್ಲಿ ಪೋಲಿಸರು ನಿಪಿ:2 ರಂತೆ ಘಟನೆಯಾದ ಸ್ಥಳದಲ್ಲಿ ಮಹಜರ ಮಾಡಿ, ಸ್ಥಳದಿಂದ ಕಲ್ಲು, ಶರ್ಟು, ನೈಟ್ ಪ್ಯಾಂಟನ್ನು

ಅಮಾನತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲ ವಿಚಾರ ಗೊತ್ತಿದ್ದರೂ, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**– ಪಾಟೀ ಸವಾಲು – ಆರೋಪಿಯ ಪರವಾಗಿ – ವಕೀಲರಿಂದ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)
ಓದಿ ಹೇಳಿ ಕೇಳಿ ಸರಿ ಇದೆ.

ವಿಶೇಷ, 2 ನೇ ಅಪರ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಚಿತ್ರದುರ್ಗ.